ಟಾಸ್ಕ್ ಫೋರ್ಸ್ ಸಮಿತಿ ಮತ್ತು ಸಾರಿಗೆ ಇಲಾಖೆಯ ಅಧಿಕಾರಿಗಳು ಅಧಿಕ ಪ್ರಮಾಣ ಮರಳು ಸಾಗಾಣಿಕೆ ಮಾಡುತ್ತಿರುವ ಲಾರಿಗಳನ್ನು ತಪಾಸಣೆ ನಡೆಸಿ ನಿಯಮಗಳ ರೀತ್ಯ ಸೂಕ್ತ ಕ್ರಮ ಜರುಗಿಸುತ್ತಿದ್ದಾರೆ

ದಿನಾಂಕ 13–11–2006ರಂದು ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಅನಧಿಕೃತ ಮರಳು ಗಣಿಗಾರಿಕೆಯ ವಿಷಯವನ್ನು ಚರ್ಚಿಸಿ, ಅನಧಿಕೃತ ಮರಳು ಗಣಿಗಾರಿಕೆಯಿಂದಾಗಿ ಅನಧಿಕೃತ ಮರಳು ಸಾಗಾಣಿಕೆ ಆಗುತ್ತಿರುವುದರಿಂದ ಅನಧಿಕೃತ ಮರಳು ಗಣಿಗಾರಿಕೆಗಳ ಮೂಲಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೂಡಲೆ ಮುಂದಿನ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಹಾಗೂ ಅನಧಿಕೃತ ಮರಳು ಗಣಿಗಾರಿಕೆಯನ್ನು ತೊಡಗಿರುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲು ಮಾಡುವಂತೆ ಹಾಗೂ ಯಂತ್ರೋಪಕರಣಗಳನ್ನು ವಶಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಉಪ ನಿರ್ದೇಶಕರು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಕನಕಮರ ಇವರಿಗೆ ಸೂಚಿಸಲಾಯಿತು

ದಿನಾಂಕ 18–1–2007ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಒಳಾಡಳಿತ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಧಿಕಭಾರ ಹೇರಿರುವ ವಾಹನದ ತಪಾಸಣೆಗಾಗಿ ಸಂಚಾರಿ ದಳಗಳನ್ನು ರಚಿಸಲು, ವೇ ಬ್ರಿಡ್ಜ್‌ಗಳನ್ನು ನಿರ್ಮಿಸಲು ಮತ್ತು ತಪಾಸಣಾ ಕೇಂದ್ರಗಳನ್ನು ಸ್ಥಾಪಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲು ತೀರ್ಮಾನಿಸಲಾಗಿರುತ್ತದೆ

921(740) ಶ್ರೀ ನರಸಿಂಹಸ್ವಾಮಿ ಜೆ (ದೊಡ್ಡಬಳ್ಳಾಪುರ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಗುಂಡಂಗೆರೆ, ಹೊಸಹಳ್ಳಿ ಮತ್ತು ತೂಬಗೆರೆ ಗ್ರಾಮಗಳಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ವಿದ್ಯುತ್ ಉಪ ಕೇಂದ್ರಗಳಲ್ಲಿ ಕಾಮಗಾರಿ ಈಗ ಯಾವ ಹಂತದಲ್ಲಿದೆ,

ಆ) ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು,

ಇ) ಕಾಮಗಾರಿಯನ್ನು ತಕ್ಷಣ ತೆಗೆದುಕೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ದೊಡ್ಡಬಳ್ಳಾಪುರ ತಾಲ್ಲೂಕಿನ ತೂಬಗೆರೆ ಗ್ರಾಮದಲ್ಲಿ 66/11 ಕೆ ವಿ ವಿದ್ಯುತ್ ಉಪಕೇಂದ್ರದ ಕಾಮಗಾರಿಯನ್ನು 24-6-2006ರಲ್ಲಿ ಪ್ರಾರಂಭಿಸಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿದೆ ಇದೇ ತಾಲ್ಲೂಕಿನ ಗುಂಡಂಗೆರೆಯಲ್ಲಿ 66/11 ಕೆ ವಿ ವಿದ್ಯುತ್ ಸಬ್-ಸ್ಟೇಷನ್ ಸ್ಥಾಪಿಸಲು ಕಾಮಗಾರಿಯ ಗುತ್ತಿಗೆಯನ್ನು ಗುತ್ತಿಗೆದಾರರಿಗೆ ದಿನಾಂಕ 8-12-2006ರಂದು ವಹಿಸಲಾಗಿದೆ ಕಾಮಗಾರಿಯನ್ನು ಸದ್ಯದಲ್ಲಿಯೇ ಪ್ರಾರಂಭಿಸಲಾಗುವುದು ಹೊಸಹಳ್ಳಿಯಲ್ಲಿ ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯು ಸಧ್ಯದಲ್ಲಿ ಇರುವುದಿಲ್ಲ

ಇ) ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಉದ್ಭವಿಸುವುದಿಲ್ಲ

922 (1214) Shri Narendra Babu N L (Rajajinagar) will the Minister for Transport be pleased to State?

a) How many city transport buses are running in Bangalore city and sub urban region (Route wise details to be furnished),

b) So far, how many number of bus passes being issued to senior citizen and physically handicapped,

c) What is the yardstick fixed to issue these passes,

d) What is the reason to held back the distribution of bus passes to Senior Citizens and handicapped

e) Is there any proposal before the Government to issue bus passes to Widow and Widowers

f) How many buses are plying in different routes at Rajajinagar Legislative Constituency (furnish the full details, routewise)

g) How many routes are stipulated for the women travelers in this constituency,

h) How much income is generated by these buses to the Government?